(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು):– ಮಾನ್ಯ ಅಧ್ಯಕ್ಷರೆ, ದಿನಾಂಕ 23.07.2008 ರಂದು 03ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 23 ಪ್ರಶ್ನೆಗಳ ಪೈಕಿ 21 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಮಂಡಿಸಲಾಯಿತು. ಅನುಬಂಧ–1

3. ಚುನಾವಣಾ ಪ್ರಸ್ತಾವ

ವಿಷಯ:– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವ್ಯವಸ್ಥಾಪನಾ ಮಂಡಳಿಗೆ ಇಬ್ಬರನ್ನು ಸದಸ್ಯರನ್ನಾಗಿ ನೇಮಿಸುವ ಬಗ್ಗೆ:

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಪರವಾಗಿ):–

ಮಾನ್ಯ ಅಧ್ಯಕ್ಷರೆ:–

ಅ. 1992ನೇ ಇಸವಿಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ನಿಯಮಾವಳಿ ನಿಯಮ 18(1) (8) ರ ಪ್ರಕಾರ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವ್ಯವಸ್ಥಾಪನಾ ಮಂಡಳಿಗೆ ಇಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ. 1965ರ ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಕಾಯ್ದೆ ಕಲಂ–3ರ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

4. ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸತಕ್ಕ ವಿಷಯಗಳು

ವಿಷಯ:– ಸಂಸತ್ ಸದಸ್ಯರಾದ ಮಾನ್ಯ ಹೆಚ್.ಟಿ. ಸಾಂಗ್ಲಿಯಾನ ಅವರ ಕಛೇರಿಯ ಮೇಲೆ ದಾಳಿ ನಡೆದಿರುವ ಬಗ್ಗೆ.